# ನೇಮಕಾತಿ ಪ್ರಕಟಣೆ
## ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ, ಹಾಸನ
## ಅಧಿಸೂಚನೆ ಸಂಖ್ಯೆ 1/2019, ದಿನಾಂಕ: 30.01.2019

ವಿಷಯಃ ಆದೇಶಜಾರಿಕಾರರ ಮತ್ತು ಸೇವಕರ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ.

ಉಲ್ಲೇಖಃ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆಃ ಎಲ್‌ಸಿಎ-II. 128/2012 ದಿನಾಂಕ 18-09-2018.

ಮೇಲ್ಕಂಡ ಅಧಿಸೂಚನೆಯನ್ವಯ ಹಾಸನ ಜಿಲ್ಲಾ ನ್ಯಾಯಾಲಯ ಘಟಕದ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಆದೇಶಜಾರಿಕಾರರ ಮತ್ತು ಸೇವಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ (Online) ಮೂಲಕ ದಿನಾಂಕಃ 04.02.2019 ರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕಡೆಯ ದಿನಾಂಕ: 05.03.2019**

ವಿ.ಸೂಚನೆಃ

1. ಅರ್ಜಿಗಳನ್ನು ಕಡ್ಡಾಯವಾಗಿ ಹಾಸನ ಜಿಲ್ಲಾ ನ್ಯಾಯಾಲಯ ವೆಬ್‌ಸೈಟ್ **https://districts.ecourts.gov.in/hassan-onlinerecruitment** ನಲ್ಲಿ ದಿನಾಂಕಃ 04.02.2019 ರಿಂದ ದಿನಾಂಕಃ 05.03.2019 ರ ರಾತ್ರಿ 11.59 ರವರೆಗೆ ಮಾತ್ರ ಸಲ್ಲಿಸತಕ್ಕದ್ದು.
2. ಅಭ್ಯರ್ಥಿಗಳು ಅರ್ಜಿಯಲ್ಲಿ ತಮ್ಮ ಚಾಲ್ತಿಯಲ್ಲಿರುವ ದೂರವಾಣಿ ಸಂಖ್ಯೆ ಹಾಗೂ ಇ-ಮೇಲ್ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು.

### ಆದೇಶ ಜಾರಿಕಾರರು ಃ

1. ಹುದ್ದೆಗಳ ಸಂಖ್ಯೆ – 5
2. ವೇತನ ಶ್ರೇಣಿ – 19950-450-20400-500-22400-550-24600-600-27000-650-29600-750-32600-850-36000-950- 37900 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಅಂಗವಿಕಲ | ಒಟ್ಟು |
|---|---|---|---|---|---|
| III-B | | | 1 | | 1 |
| III-A | 1 | | | | 1 |
| II - ಎ | | 1 | | | 1 |
| ಸಾಮಾನ್ಯ | | | 1 | 1 * | 2 |
| ಒಟ್ಟು | 1 | 1 | 2 | 1 | 5 |

* ಅಂಗವಿಕಲ ಅಭ್ಯರ್ಥಿಗಳಲ್ಲಿ ಒಂದು ಹುದ್ದೆ ಶ್ರವಣದೋಷವುಳ್ಳವರಿಗೆ (Eardisability).

3. ವಿದ್ಯಾರ್ಹತೆ ಃ

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ನಾಲ್ಕು ಚಕ್ರಗಳ ವಾಹನ ಚಾಲನಾ ಪರವಾನಗಿ ಇರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

4. ಆಯ್ಕೆ ವಿಧಾನ ಃ

ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ನೇಮಕಾತಿ) ನಿಯಮ 1982 ಮತ್ತು (ತಿದ್ದುಪಡಿ) ನಿಯಮ 2007ರ ಪ್ರಕಾರ.

ಕನ್ನಡ ಓದಲು ಮತ್ತು ಬರೆಯಲು ಅಭ್ಯರ್ಥಿ ಹೊಂದಿರುವ ಪ್ರಾವೀಣ್ಯತೆ ಮತ್ತು ಅಭ್ಯರ್ಥಿಯ ಸಾಮಾನ್ಯ ಜ್ಞಾನದ ಬಗ್ಗೆ ಸಂದರ್ಶನ.

downloaded from: www.kpscvaani.com

ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 25 ಅಭ್ಯರ್ಥಿಗಳಂತೆ (1:25 ರ ಅನುಪಾತದಲ್ಲಿ) ಅತೀ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

## ಸೇವಕರು :

1. ಹುದ್ದೆಗಳ ಸಂಖ್ಯೆ – 5

2. ವೇತನ ಶ್ರೇಣಿ– 17000-400-18600-450-20400-500-22400-550-24600-600-27000-650-28950 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಒಟ್ಟು |
|---|---|---|---|---|---|
| ಪ.ಜಾತಿ | 1 | | | | 1 |
| II – ಎ | | | 1 | | 1 |
| ಸಾಮಾನ್ಯ | | 1 | 1 | 1 | 3 |
| ಒಟ್ಟು | 1 | 1 | 2 | 1 | 5 |

3. ವಿದ್ಯಾರ್ಹತೆ :

7ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು. ಸದರಿ ಅಂಕಪಟ್ಟಿಗೆ ಕಡ್ಡಾಯವಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಪಡೆದಿರಬೇಕು (ಪಬ್ಲಿಕ್ ಪರೀಕ್ಷೆಯನ್ನು ಹೊರತುಪಡಿಸಿ). ಕೈಬರಹದ ಅಂಕಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ. ಅಂಕಪಟ್ಟಿಗಳು ಕಡ್ಡಾಯವಾಗಿ ಮುದ್ರಿತ ಪ್ರತಿಗಳಾಗಿರಬೇಕು.

4. ಆಯ್ಕೆ ವಿಧಾನ :

ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 01 ಹುದ್ದೆಗೆ 10 ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ : ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

## ವಯೋಮಿತಿ :

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ) ಗರಿಷ್ಠ ವಯೋಮಿತಿ

| | |
|---|---|
| ಸಾಮಾನ್ಯ ವರ್ಗ | 35 ವರ್ಷಗಳು |
| ಪ್ರವರ್ಗ - 2ಎ, 2ಬಿ, 3ಎ, 3ಬಿ | 38 ವರ್ಷಗಳು |
| ಪ.ಜಾತಿ, ಪ.ಪಂಗಡ, ಪ್ರವರ್ಗ-1 | 40 ವರ್ಷಗಳು |

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

downloaded from: www.kpscvaani.com

**ವಯೋಮಿತಿ ಸಡಿಲಿಕೆ :**

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

1. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.
2. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.
3. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.
4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.
5. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
6. ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

**ಪರಿವೀಕ್ಷಣಾ ಅವಧಿ :**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

ಸದರಿ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳು ಮೂರು ತಿಂಗಳ ಒಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಶೇಕಡಾ 60 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು ಪಾಸು ಮಾಡತಕ್ಕದ್ದು.

**ಅರ್ಜಿ ಸಲ್ಲಿಸುವ ವಿಧಾನ :**

ನಿಗಧಿತ ಅರ್ಜಿ ಶುಲ್ಕ ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ :

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮತ್ತು ಮಾಜಿ ಸೈನಿಕ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು | ರೂ.200/- |
| ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳು | ರೂ.100/- |

downloaded from: www.kpscvaani.com

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ **https://districts.ecourts.gov.in/hassan-onlinerecruitment** ನ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect** ಮೂಲಕ **Online Payment through Net-Banking / Credit-Card / Debit-Card/ Challan Download** ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ **Print out** ಅನ್ನು ಪಡೆದುಕೊಂಡು ಎಸ್.ಬಿ.ಐ. ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್ ಃ ಪೋಸ್ಟಲ್ ಆರ್ಡರ್ ಃ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

1. ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ **SMS** ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
3. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.
   - ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ **5cm** ಉದ್ದ **X 3.6 cm** ಅಗಲವುಳ್ಳದ್ದಾಗಿರಬೇಕು ಮತ್ತು **50 kb** ಅಳತೆಯದ್ದಾಗಿರಬೇಕು ಹಾಗೂ ಅದು **.jpg** ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.
   - ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)
   - ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (**2.5 cm** ಉದ್ದ **x 7.5 cm** ಅಗಲವುಳ್ಳದ್ದಾಗಿರಬೇಕು ಮತ್ತು **25 kb** ಅಳತೆಯದ್ದಾಗಿರಬೇಕು ಹಾಗೂ ಅದು **.jpg** ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.
4. ತದನಂತರ ಅಭ್ಯರ್ಥಿಯು **ON-LINE** ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು **Download** ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರುಪಡಿಸಕ್ಕದ್ದು.
5. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

downloaded from: www.kpscvaani.com

6. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು / ಸಲ್ಲಿಸಲು ದಿನಾಂಕಃ 05.03.2019 ರ ರಾತ್ರಿ 11.59 ರವರೆಗೆ ಅವಕಾಶವಿರುತ್ತದೆ.

ಮತ್ತು

7. ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕಃ07.03.2019 ಕಡೆಯ ದಿನಾಂಕವಾಗಿದ್ದು ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

8. ಅರ್ಹ ಅಭ್ಯರ್ಥಿಗಳಿಗೆ SMS & E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

9. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

10. ಸೇವಾನಿರತ ಅಭ್ಯರ್ಥಿಗಳು ಅರ್ಜಿಗಳ ಸ್ವೀಕೃತಿಗಾಗಿ ನಿಗದಿಪಡಿಸಲಾದ ದಿನಾಂಕ ಹಾಗೂ ಸಮಯವನ್ನು ಮೀರದಂತೆ ಆನ್‌ಲೈನ್‌ನಲ್ಲಿ ತಮ್ಮ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಮತ್ತು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡಲಾದ " ನಿರಾಕ್ಷೇಪಣಾ ಪ್ರಮಾಣಪತ್ರ " ವನ್ನೂ ಹೊಂದಿರತಕ್ಕದ್ದು.

11. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ'ಯಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ 'ಇ'ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್'ನಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.

12. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರ ಆದೇಶ ಸಂಖ್ಯೆಃ ಸಿಆಸುಇ/53/ಸನೆನಿ/2007, ದಿನಾಂಕ 04.01.2008ರ ಪ್ರಕಾರ ನಿಗದಿತ ನಮೂನೆ – 2ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

13. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಜೊತೆ ನಮೂನೆ-1ರಲ್ಲೂ (Creamy Layer Certificate) ಸಲ್ಲಿಸತಕ್ಕದ್ದು.

14. ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳ ಮೊಹರಿನೊಂದಿಗೆ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

15. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿಃ19.11.2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃ ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣಪತ್ರವನ್ನು ಪಡೆದಿರಬೇಕು.

16. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/44/ಸೇನನಿ/2001ರ ದಿನಾಂಕ 27-07-2001ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

17. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸುವುದು.

18. ವಿಧವೆಯರು, ಜೀತ ಕಾರ್ಮಿಕರು ಮತ್ತು ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

19. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ

downloaded from: www.kpscvaani.com

ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

20. ಮೌಖಿಕ ಪರೀಕ್ಷೆಯ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ, ಬೆರಳಚ್ಚು ಪರೀಕ್ಷೆಗಳ ಪ್ರಮಾಣಪತ್ರಗಳು, ಜಾತಿ ಪ್ರಮಾಣ ಪತ್ರ, ಗ್ರಾಮೀಣ / ಮಾಜಿ ಸೈನಿಕರು / ವಿಧವೆಯರು/ ಅಂಗವಿಕಲರು ಸಂಬಂಧಿಸಿದಂತೆ ಕ್ಲೇಮು ಮಾಡಿದ ಮೀಸಲಾತಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ, ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹಾ ಗುರಿಯಾಗಬೇಕಾಗುತ್ತದೆ.

21. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

22. ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಹಾಸನದ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

(ಕೆ.ಎಸ್. ತಿಮ್ಮಣ್ಣಾಚಾರ್)
ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,
ಹಾಸನ

ಅಧಿಸೂಚನೆಯ ನಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಸಲ್ಲಿಸಲಾಗಿದೆ:

ಮಹಾವಿಲೇಖನಾಧಿಕಾರಿಗಳು
ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ,
ಬೆಂಗಳೂರು – 560 001.

ಅಧಿಸೂಚನೆಯ ನಕಲನ್ನು ಈ ಕೆಳಕಂಡವರಿಗೆ ರವಾನಿಸಲಾಗಿದೆ:

1. ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ನಗರ, ಗ್ರಾಮಾಂತರ, ಲಘುವ್ಯಾಜ್ಯಗಳ ನ್ಯಾಯಾಲಯ, ಬೆಂಗಳೂರು, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಬಿಜಾಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ್, ಗುಲ್ಬರ್ಗ, ಹಾವೇರಿ, ಕೊಡಗು, ಕೋಲಾರ, ಕೊಪ್ಪಳ, ಮಂಗಳೂರು, ಮಂಡ್ಯ, ಮೈಸೂರು, ರಾಮನಗರ, ರಾಯಚೂರು, ಶಿವಮೊಗ್ಗ, ತುಮಕೂರು, ಉಡುಪಿ ಮತ್ತು ಕಾರವಾರ, ಯಾದಗಿರಿ ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ.
1. ವಿಲೇಖನಾಧಿಕಾರಿಗಳು, ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು – ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ.
2. ಪ್ರಧಾನ ನ್ಯಾಯಾಧೀಶರು, ಕುಟುಂಬ ನ್ಯಾಯಾಲಯ, ಹಾಸನ
3. ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು, ಹಾಸನ.
4. ಹಿರಿಯ ಸಿವಿಲ್ ನ್ಯಾಯಾಧೀಶರು, ಅರಸೀಕೆರೆ, ಅರಕಲಗೂಡು, ಬೇಲೂರು, ಚನ್ನರಾಯಪಟ್ಟಣ, ಹೊಳೆನರಸೀಪುರ, ಸಕಲೇಶಪುರ.
5. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಹಾಸನ, ಅರಸೀಕೆರೆ, ಚನ್ನರಾಯಪಟ್ಟಣ.
6. ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಹಾಸನ,
7. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಆಲೂರು, ಅರಕಲಗೂಡು, ಬೇಲೂರು, ಹೊಳೆನರಸೀಪುರ, ಸಕಲೇಶಪುರ.

downloaded from: www.kpscvaani.com

ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ.

8. ಸಂಕಲನಾಧಿಕಾರಿ, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಮೈಸೂರು – ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ.
9. ಆಯುಕ್ತರು, ವಾರ್ತಾ ಇಲಾಖೆ, ನಂ.17, ಭಗವಾನ್ ಮಹಾವೀರ (ಇನ್‌ಫೆಂಟ್ರಿ) ಜೈನ್ ರಸ್ತೆ, ಬೆಂಗಳೂರು – 560 001 – ಇವರಿಗೆ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ.
10. ಉಪ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ವಾರ್ತಾ ಭವನ, ಹಾಸನ.
11. ಸಾಫ್ಟ್‌ವೇರ್ ಟೆಕ್ನಿಷಿಯನ್, ಜಿಲ್ಲಾ ನ್ಯಾಯಾಲಯ, ಹಾಸನ ಇವರಿಗೆ ಅಂತರ್ಜಾಲದಲ್ಲಿ ಪ್ರಕಟಿಸಲು ಕೋರಿ.
12. ಕಛೇರಿಯ ಸೂಚನಾ ಫಲಕಕ್ಕೆ
13. ಕಛೇರಿ ನಕಲು.
14. ಹೆಚ್ಚಿನ ಪ್ರತಿ.

downloaded from: www.kpscvaani.com